ಆ) ಇದರಿಂದಾಗಿ ಕರ್ತವ್ಯ ನಿಷ್ಠೆಯಲ್ಲಿ ಕೊರತೆ ಸಾರ್ವಜನಿಕ ಕೆಲಸದಲ್ಲಿ ನಿರಾಸಕ್ತಿ ಮತ್ತು ಅಶಿಸ್ತು ಮೈಗೂಡುವುದಿಲ್ಲವೆ,

ಇ) ಈ ಲೋಪಗಳ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಈ ನೌಕರರುಗಳನ್ನು ಬೇರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾವಣೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೆ,

ಉ) ಹೌದಾದರೆ ಯಾವಾಗ ಜಾರಿಗೊಳಿಸಲಾಗುವುದು,

ಶ್ರೀ ಬಿ.ಬಿ.ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು)

ಆ) ಅಂತಹ ಘಟನೆಗಳು ಇದುವರೆಗೆ ಸರ್ಕಾರದ ಗಮನಕ್ಕೆ ಬಂದಿಲ್ಲ.

ಇ, ಈ ಮತ್ತು ಉ) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ 1987ರಲ್ಲಿ ಅಭಿವೃದ್ಧಿ ಪ್ರಾಧಿಕಾರದ ನೌಕರರನ್ನು ಒಂದು ಅಭಿವೃದ್ಧಿ ಪ್ರಾಧಿಕಾರದಿಂದ ಇನ್ನೊಂದು ಅಭಿವೃದ್ಧಿ ಪ್ರಾಧಿಕಾರಕ್ಕೆ ವರ್ಗಾಯಿಸಲು ಅವಕಾಶವಿದೆ. ಅಭಿವೃದ್ಧಿ ಪ್ರಾಧಿಕಾರದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸೃಜಿಸುವ ವಿಷಯ ಪರಿಶೀಲನೆಯಲ್ಲಿದೆ. ಇದು ಅಂತಿಮವಾಗಿ ತೀರ್ಮಾನವಾದ ಕೂಡಲೇ ಒಂದು ಪ್ರಾಧಿಕಾರದಿಂದ ಇನ್ನೊಂದು ಪ್ರಾಧಿಕಾರಕ್ಕೆ ವರ್ಗಾಯಿಸುವ ವಿಷಯಕ್ಕೆ ಅಂತಿಮ ರೂಪ ಕೊಟ್ಟಂತಾಗುತ್ತದೆ.

ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸುವುದರಿಂದ ಆಗುವ ತೊಂದರೆ.

262(545)

ಶ್ರೀ ಎ.ಎಸ್.ಗುರುಸ್ವಾಮಿ: ಮಾನ್ಯ ಪೌರಾಡಳಿತ ಮಾನ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುರಸಭೆ, ನಗರಪಾಲಿಕೆ ಮುಂತಾದ ಸ್ಥಳದಲ್ಲಿ ಕಾರ್ಯನಿರ್ವಹಿಸುವ ನೌಕರರು ಒಂದೇ ಸ್ಥಳದಲ್ಲಿ ಕಾರ್ಯ ನಿರ್ವಹಿಸುವುದರಿಂದ ಸ್ವಹಿತಾಸಕ್ತಿ ಬೆಳೆಸಿಕೊಳ್ಳುವ ಅಪಾಯ ಇಲ್ಲವೇ?

ಆ) ಇದರಿಂದಾಗಿ ಕೆಲಸದಲ್ಲಿ ನಿರಾಸಕ್ತಿ, ಅಶಿಸ್ತು ಮತ್ತು ನಿಷ್ಠೆ ಕೊರತೆ ಕಂಡುಬರುವುದಿಲ್ಲವೆ?

ಇ) ಇದರ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮವೇನು?

ಈ) ಈ ನೌಕರರನ್ನು ಬೇರೆ ಪುರಸಭೆ, ನಗರಸಭೆಗೆ ವರ್ಗಾವಣೆ ಮಾಡುವ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಉ) ಹೌದಾದರೆ ಯಾವಾಗ ಜಾರಿಗೊಳಿಸಲಾಗುವುದು?

ಶ್ರೀ ಮಲ್ಲಿಕಾರ್ಜುನ ನಾಗಪ್ಪ (ಪೌರಾಡಳಿತ ರಾಜ್ಯ ಸಚಿವರು):

ಅ) ಹೌದು.

ಆ) ಹೌದು.

ಇ) ಪುರಸಭೆ : ನಗರಸಭೆ ಮತ್ತು ಪಟ್ಟಣ ಪಂಚಾಯತಿಗಳ ನೌಕರರನ್ನು ಸ ವರ್ಗಾವಣೆ ನೀತಿಯಂತೆ ಒಂದು ಸ್ಥಳದಿಂದ ಇನ್ನೊಂದು ವರ್ಗಾಯಿಸಬಹುದಾಗಿದೆ.

ಈ) ಒಂದು ಪುರಸಭೆಯಿಂದ ಇನ್ನೊಂದು ಪುರಸಭೆ : ನಗರಸಭೆಗೆ ವರ್ಗಾಯಿಸುವ ಪದ್ಧತಿ ಈಗಾಗಲೇ ಜಾರಿಯಲ್ಲಿದೆ.

ಉ) ಈಗಾಗಲೇ ಜಾರಿಯಲ್ಲಿದೆ.

ಕುಂಬಾರ ಜನಾಂಗದ ಸಾರ್ವಜನಿಕ ವಿದ್ಯಾರ್ಥಿನಿಲಯಗಳು.

263(488)

ಶ್ರೀ ಸಿ.ಗುರುಸ್ವಾಮಿ(ಚಾಮರಾಜನಗರ): ಮಾನ್ಯ ಸಮಾಜ ಕಲ್ಯಾಣ ಸಚ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿ ಕುಂಬಾರ ಜನಾಂಗದವರಿಗಾಗಿಯೇ ಸಾ ವಿದ್ಯಾರ್ಥಿನಿಲಯಗಳು ಅಸ್ತಿತ್ವದಲ್ಲಿದೆಯೇ?

2) ಇದ್ದಲ್ಲಿ ಯಾವ ಯಾವ ಸ್ಥಳಗಳಲ್ಲಿದೆ? ಸದರಿ ವಿದ್ಯಾರ್ಥಿನಿಲ ಸರ್ಕಾರದ ಅನುದಾನವೆಷ್ಟು?

3) ಈ ವಿದ್ಯಾರ್ಥಿನಿಲಯಗಳನ್ನು ಸಮರ್ಪಕವಾಗಿ ನಿರ್ವಹಿಸಿ ಬರಲಾಗುತ್ತಿದೆಯೇ?

4) ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡ ಹೊಂದಿರುವುದೇ (ವಿವರ ನೀಡಿ